# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1511 |
| ಸದಸ್ಯರ ಹೆಸರು | ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 18/03/2021. |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಲೋಕಸೇವಾ ಆಯೋಗದ ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯುವಂತಹ ಸಂದರ್ಭದಲ್ಲಿ ಕೈಗೊಳ್ಳುವಂತಹ ಸುರಕ್ಷತಾ ಕ್ರಮಗಳೇನು; | ಕರ್ನಾಟಕ ಲೋಕಸೇವಾ ಆಯೋಗವು ತಿಳಿಸಿರುವಂತೆ<br>• ಆಯೋಗವು ರಾಜ್ಯಾದ್ಯಂತ ನಡೆಸುವ ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಯಾಯಾ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ಮುಖ್ಯ ಮೇಲ್ವಿಚಾರಕರನ್ನಾಗಿ ನೇಮಿಸಿ, ಈ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕಟ್ಟುನಿಟ್ಟಾಗಿ ನಡೆಸಲು ಕಾಲಾಕಾಲಕ್ಕೆ ಸೂಚನೆಗಳನ್ನು ನೀಡಲಾಗಿರುತ್ತದೆ.<br>• ಎಲ್ಲಾ ಜಿಲ್ಲಾ/ತಾಲ್ಲೂಕು ಕೇಂದ್ರಗಳಲ್ಲಿ ಪರೀಕ್ಷೆಗೆ ಸಂಬಂಧಿಸಿದ ಗೋಪ್ಯ ಸಾಮಗ್ರಿಗಳ ಸ್ವೀಕೃತಿ, ಠೇವಣಿ, ಹಂಚಿಕೆಯಂತಹ ಸೂಕ್ಷ್ಮ ಸ್ವರೂಪದ ಎಲ್ಲಾ ಪರೀಕ್ಷಾ ಕಾರ್ಯಗಳನ್ನು ಕರ್ನಾಟಕ ಸೆಕ್ಯೂರ್ಡ್ ಎಗ್ಸಾಮಿನೇಷನ್ ಸಿಸ್ಟಂ ಅನ್ನು ಅಳವಡಿಸಿಕೊಂಡು, ಆಯೋಗದಲ್ಲಿ ಕೇಂದ್ರೀಕೃತ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿ, ಸಂಬಂಧಿತ ಜಿಲ್ಲಾ ಖಜಾನೆ ಮತ್ತು ತಾಲ್ಲೂಕುಗಳ ಉಪಖಜಾನೆಗಳಲ್ಲಿ ಗೌಪ್ಯ ಸಾಮಗ್ರಿಗಳನ್ನು ಠೇವಣಿಸುವ ದಿನಾಂಕದಿಂದ ಪರೀಕ್ಷೆ ಮುಕ್ತಾಯದ ದಿನಾಂಕದವರೆಗೆ KSWAN ಮುಖಾಂತರ ಸಿಸಿಟಿವಿ ಯನ್ನು ಆಯೋಗದಲ್ಲಿ ವೀಕ್ಷಿಸಲಾಗಿರುತ್ತದೆ ಮತ್ತು ಸದರಿ ರೆಕಾರ್ಡಿಂಗ್ ಅನ್ನು State Data Centre ನಲ್ಲಿ ಸಂಗ್ರಹಿಸಲು ಕ್ರಮವಹಿಸಲಾಗಿರುತ್ತದೆ.<br>• ಪ್ರಶ್ನೆಪತ್ರಿಕೆಗಳನ್ನು ಭದ್ರಪಡಿಸಲಾದ ಜಿಲ್ಲೆಗಳ ಖಜಾನೆ ಮತ್ತು ತಾಲ್ಲೂಕುಗಳ ಉಪಖಜಾನೆಗಳಿಗೆ 24X7 ಸಶಸ್ತ್ರ ಪೊಲೀಸ್ ಭದ್ರತೆ ನೀಡುವಂತೆ ಪೊಲೀಸ್ ಆಯುಕ್ತರುಗಳಿಗೆ, ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಕಾಲಕಾಲಕ್ಕೆ ಸೂಚನೆಗಳನ್ನು ನೀಡಲಾಗಿರುತ್ತದೆ.<br>ಪರೀಕ್ಷಾ ಗೋಪ್ಯ ಸಾಮಗ್ರಿಗಳನ್ನು ಜಿಲ್ಲಾ ಮತ್ತು ತಾಲ್ಲೂಕು ಖಜಾನೆಗಳಲ್ಲಿ ಠೇವಣಿ ಇರಿಸುವ, ಪರಿಶೀಲನೆ ಹಾಗೂ ವಿತರಣೆ ಸಮಯದಲ್ಲಿ ಅನುಕ್ರಮವಾಗಿ ಅಪರ ಜಿಲ್ಲಾಧಿಕಾರಿಗಳು, ಜಿಲ್ಲಾ ಖಜಾನಾಧಿಕಾರಿಗಳು |

ಹಾಗೂ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರುಗಳನ್ನೊಳಗೊಂಡ 'ತ್ರಿಸದಸ್ಯ ಸಮಿತಿ' ಯನ್ನು ರಚಿಸಿ, ಈ ತಂಡವು ಖುದ್ದಾಗಿ ಹಾಜರಿದ್ದು ಸದರಿ ಕಾರ್ಯಗಳನ್ನು ನಿರ್ವಹಿಸುವಂತೆ ಸೂಚಿಸಲಾಗಿರುತ್ತದೆ.

- ಇತ್ತೀಚೆಗೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳು ಮೈಕ್ರೋ ಚಿಪ್ ಮತ್ತು ಇತರೆ ಉಪಕರಣಗಳನ್ನು ಅಳವಡಿಸಿಕೊಂಡು ಬಂದು ಪರೀಕ್ಷಾ ಕೇಂದ್ರಗಳಲ್ಲಿ ಅಕ್ರಮಗಳನ್ನು ಎಸಗುತ್ತಿರುವ ಮಾಹಿತಿಯಿರುವುದರಿಂದ, ಈ ಬಗ್ಗೆ ಕಟ್ಟುನಿಟ್ಟಾಗಿ ಫ್ರಿಸ್ಕಿಂಗ್ ಮಾಡಲು ಮತ್ತು ಅಲ್ಲಲ್ಲಿ ಮೊಬೈಲ್ ಸ್ಕ್ವಾಡ್‌ಗಳನ್ನು ನಿಯೋಜಿಸುವಂತೆ, ಸಂಬಂಧಿತ ಪೊಲೀಸ್ ಆಯುಕ್ತರುಗಳಿಗೆ ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಕೋರಲಾಗಿರುತ್ತದೆ
- ಇದಲ್ಲದೇ ದಂಡ ಪ್ರಕ್ರಿಯೆ ಸಂಹಿತೆ ಅಡಿಯಲ್ಲಿ ಸೆಕ್ಷನ್ 144ರಡಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿರುತ್ತದೆ ಮತ್ತು ಪ್ರತ್ಯೇಕವಾಗಿ ಎಲ್ಲಾ ಪರೀಕ್ಷಾ ಕೇಂದ್ರಗಳ ಸಮೀಪದಲ್ಲಿನ ಜೆರಾಕ್ಸ್, ಕಂಪ್ಯೂಟರ್ ಹಾಗೂ ಕೋಚಿಂಗ್ ಸೆಂಟರ್‌ಗಳನ್ನು ಮುಚ್ಚಿಸಲು ಕಟ್ಟುನಿಟ್ಟಾದ ಕ್ರಮಗಳನ್ನು ಕೈಗೊಳ್ಳಲು ಸಂಬಂಧಿತ ಜಿಲ್ಲಾಧಿಕಾರಿಗಳನ್ನು ಕೋರಲಾಗಿರುತ್ತದೆ.
- ಇದಲ್ಲದೇ ಪರೀಕ್ಷಾ ದಿನದಂದು ಪ್ರತಿ ಪರೀಕ್ಷಾ ಉಪ ಕೇಂದ್ರಗಳಲ್ಲಿ ಗ್ರೂಪ್-ಬಿ ದರ್ಜೆಗಿಂತ ಕಡಿಮೆಯಿಲ್ಲದ ಅಧಿಕಾರಿಗಳನ್ನು ವೀಕ್ಷಕರು/ಫ್ಲೈಯಿಂಗ್ ಸ್ಕ್ವಾಡ್, ಸ್ಥಳೀಯ ನಿರೀಕ್ಷಣಾಧಿಕಾರಿ (Local Inspecting Officer)ಗಳನ್ನಾಗಿ ನಿಯೋಜಿಸಲಾಗಿರುತ್ತದೆ.
- ಸ್ಪರ್ಧಾತ್ಮಕ ಪರೀಕ್ಷಾ ಸಂಬಂಧ, ಸೂಕ್ಷ್ಮ ಪರೀಕ್ಷಾ ಕೇಂದ್ರಗಳನ್ನು ಗುರುತಿಸಿ, ಅಂತಹ ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಜಾಮರ್‌ಗಳನ್ನು ಮೊಟ್ಟ ಮೊದಲಬಾರಿಗೆ ಇತ್ತೀಚಿಗೆ ನಡೆಸಿದ ಪ್ರಥಮ ಸರ್ಜ ಸಹಾಯಕರ ಸ್ಪರ್ಧಾತ್ಮಕ ಪರೀಕ್ಷೆಗೆ UPSC ಮಾದರಿಯಲ್ಲಿ ಅಳವಡಿಸಲಾಗಿರುತ್ತದೆ.
- ಯಾವುದೇ ದುರಾಚಾರದಲ್ಲಿ ಭಾಗಿಯಾದ ಬಗ್ಗೆ ವಿಚಾರಣಾ ವರದಿ ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ರದ್ದುಪಡಿಸಲಾ ಗಿರುತ್ತದೆ. ಹಾಗೂ ಮುಂದಿನ ಪರೀಕ್ಷೆಗಳಿಂದಲೂ ಸಹ ಡಿಬಾರ್ ಮಾಡಲು ಕ್ರಮವಹಿಸಲಾಗಿರುತ್ತದೆ.

| | | |
|---|---|---|
| [illegible]) | ಲೋಕಸೇವಾ ಆಯೋಗವು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುವಂತಹ ಸಂದರ್ಭದಲ್ಲಿ ಪ್ರಶ್ನೆ ಪತ್ರಿಕೆಗಳು ಸೋರಿಕೆ ಯಾಗುತ್ತಿದ್ದು, ಇದರ ಬಗ್ಗೆ ಆಯೋಗವು ಕೈಗೊಂಡಿರುವ ಕ್ರಮಗಳೇನು ; | ಕರ್ನಾಟಕ ಲೋಕಸೇವಾ ಆಯೋಗವು ತಿಳಿಸಿರುವಂತೆ<br>• ಪ್ರಸ್ತುತ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ಪ್ರಶ್ನೆ ಪತ್ರಿಕೆಯು ಆಯೋಗದ ಸಿಬ್ಬಂದಿಯಿಂದಾದ ಸೋರಿಕೆಯಾಗಿರುವ ಹಿನ್ನೆಲೆಯಲ್ಲಿ, ಆರೋಪಿತ ಅಭ್ಯರ್ಥಿಗಳನ್ನು ಸೇವೆಯಿಂದ ಅಮಾನತ್ತುಗೊಳಿಸಿ, ಆಯೋಗವು ತನಿಖೆಗೆ ಪೂರ್ಣ ಸಹಕಾರ ನೀಡಲಾಗುತ್ತಿದ್ದೆ.<br>• ಸದರಿ ಪರೀಕ್ಷೆಗಳನ್ನು ಮಾಹಿತಿ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಆನ್‌ಲೈನ್ ಮುಖಾಂತರ ಪರೀಕ್ಷೆಗಳನ್ನು ನಡೆಸುವ ಬಗ್ಗೆ ಭಾರತ ಸರ್ಕಾರದ Staff Selection Commission ಇವರೊಂದಿಗೆ ಚರ್ಚಿಸಿ ಅದರಂತೆಯೇ ಅಳವಡಿಸಿಕೊಳ್ಳುವ ಬಗ್ಗೆ ಚಿಂತಿಸಲಾಗುತ್ತಿದೆ.<br>• ಗ್ರೂಪ್-ಸಿ ಹುದ್ದೆಗಳ ಪರೀಕ್ಷೆಗಳಿಗೆ ಲಕ್ಷಾಂತರ ಅಭ್ಯರ್ಥಿಗಳು ಅರ್ಜಿ ಸಲ್ಲಿಸುತ್ತಿದ್ದು, ಪರೀಕ್ಷಾ ದಿನದಂದು ನಡೆಯುವ ಅಕ್ರಮಗಳನ್ನು ತಡೆಗಟ್ಟಲು ನಿಟ್ಟಿನಲ್ಲಿ, ಹಾಲಿ ನಿಯಮಗಳಂತೆ ಕೇವಲ ಓ.ಎಂ.ಆರ್. ಮೂಲಕ ಉತ್ತರಿಸುವ ವಸ್ತುನಿಷ್ಠ ಬಹು ಆಯ್ಕೆ ಮಾದರಿಯಲ್ಲಿ ಪರೀಕ್ಷೆಗಳನ್ನು ನಡೆಸದೇ, ಇತರೆ ಲೋಕಸೇವಾ ಆಯೋಗ & Staff Selection Commission ನ ಮಾದರಿಯಲ್ಲಿ ಎರಡು ಹಂತದಲ್ಲಿ (2 tier) ಅಂದರೆ, ಒಂದು ವಸ್ತುನಿಷ್ಠ ಬಹುಆಯ್ಕೆ ಮಾದರಿ ಮತ್ತು ಮತ್ತೊಂದು ವಿವರಣಾತ್ಮಕ ಮಾದರಿಯಲ್ಲಿ ಪರೀಕ್ಷೆಗಳನ್ನು ನಡೆಸುವ ಬಗ್ಗೆ ನಿಯಮಗಳಲ್ಲಿ ತಿದ್ದುಪಡಿ ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ.<br>• ಆಯೋಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಲ್ಲಿ ಕೆಲವರು ಪ್ರ.ದ.ಸ. ಹುದ್ದೆಗಳ ಹುದ್ದೆಗೆ ಅಭ್ಯರ್ಥಿಗಳಾಗಿದ್ದು, General Recruitment Rules 1977ರ ಉಪನಿಯಮ 11ರಂತೆ NOC ಕೋರಿರುತ್ತಾರೆ ಮತ್ತು ಅದರಂತೆ, ನಿರಾಕ್ಷೇಪಣೆ ಪ್ರಮಾಣ ಪತ್ರವನ್ನು ಸಹ ನೀಡಲಾಗಿರುತ್ತದೆ. ಆದರೆ, ಪ್ರಸ್ತುತ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ಪ್ರಶ್ನೆ ಪತ್ರಿಕೆಯು ಆಯೋಗದ ಸಿಬ್ಬಂದಿಗಳಿಂದಲೇ ಸೋರಿಕೆಯಾಗಿರುವ ಹಿನ್ನೆಲೆಯಲ್ಲಿ, ಸದರಿಯವರುಗಳಿಗೆ ನೀಡಲಾದ NOCಯನ್ನು ಹಿಂಪಡೆಯಲಾಗಿರುತ್ತದೆ |

| | | |
|---|---|---|
| ಇ) | ಲೋಕಸೇವಾ ಆಯೋಗದ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಬೇರೆ ಇಲಾಖೆಗಳಿಗೆ ವರ್ಗಾವಣೆ ಮಾಡಲು ನಿಯಮಾವಳಿಗಳಲ್ಲಿ ಅವಕಾಶವಿದೆಯೇ; | ಪ್ರಸ್ತುತ ಇಲ್ಲ. ಆದರೆ, ಪಿ.ಸಿ.ಹೋಟಾ ಸಮಿತಿಯು ನೀಡಿರುವ ವರದಿಯಲ್ಲಿ ಆಯೋಗದ ಅಧಿಕಾರಿ/ಸಿಬ್ಬಂದಿಗಳನ್ನು ಇತರೆ ಇಲಾಖೆಗಳಿಗೆ ಎಲ್ಲಾ ವರ್ಗದ ಶೇ. 50ರಷ್ಟು ಹುದ್ದೆಗಳನ್ನು ನಿಯೋಜನೆ ಮಾಡುವ ಬಗ್ಗೆ ಹಾಗು ಇತರೆ ಇಲಾಖೆಗಳಲ್ಲಿನ ಸಿಬ್ಬಂದಿಗಳನ್ನು ನಿಯೋಜನೆ ಮೇಲೆ ಆಯೋಗಕ್ಕೆ ವರ್ಗಾವಣೆಗೊಳಪಡಿಸುವ ಬಗ್ಗೆ ಹಾಲಿ ಇರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡಲು ಕ್ರಮವಹಿಸಲಾಗಿದೆ. |
| ಈ) | ಲೋಕಸೇವಾ ಆಯೋಗದ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಿಭಾಗಗಳಲ್ಲಿ ದೀರ್ಘಕಾಲೀನವಾಗಿ ಮೂರು ವರ್ಷಗಳಿಗಿಂತ ಹೆಚ್ಚಿನ ಅವಧಿ ಒಂದೇ ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ಆಂತರಿಕ ವರ್ಗಾವಣೆಗೆ ಸಂಬಂಧಿಸಿದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ಲೋಕಸೇವಾ ಆಯೋಗವು ತಿಳಿಸಿರುವಂತೆ, ಆಯೋಗದ ಕೆಲಸ ಕಾರ್ಯಗಳು ಇತರೆ ಇಲಾಖೆಗಳಿಗಿಂತ ವಿಭಿನ್ನವಾಗಿದ್ದು, ಕಾಲಕಾಲಕ್ಕೆ ಕಾರ್ಯದೊತ್ತಡಕ್ಕೆ ಅನುಗುಣವಾಗಿ ಅಧಿಕಾರಿ/ ಸಿಬ್ಬಂದಿಗಳ ಆಂತರಿಕ ಬದಲಾವಣೆ ಮಾಡಲಾಗುತ್ತಿದೆ. |

(ಸಂಖ್ಯೆ.ಸಿಆಸುಇ 59 ಎಸ್‌ಎಲ್‌ಎ 2021

(ಬಿ.ಎಸ್ ಯಡಿಯೂರಪ್ಪ)
ಮುಖ್ಯಮಂತ್ರಿ